# ಕರ್ನಾಟಕ ವಿಧಾನ ಸಭೆ

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 374 (425)<br>ಸಮಾಜ ಕಲ್ಯಾಣ ಇಲಾಖೆಯಿಂದ ವರ್ಗಾವಣೆಗೊಂಡಿದೆ |
| ಸದಸ್ಯರ ಹೆಸರು | ಶ್ರೀ ಗೋವಿಂದರಾಜು (ವಿಧಾನಸಭಾ ಕ್ಷೇತ್ರ) |
| ಉತ್ತರಿಸುವ ದಿನಾಂಕ | 30.01.2026 |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳ ಉನ್ನತ ತಾಂತ್ರಿಕ ಹಾಗೂ ಡಿಜಿಟಲ್ ಶಿಕ್ಷಣಕ್ಕೆ ನೆರವಾಗುವ ಉಚಿತ ಲ್ಯಾಪ್‌ಟಾಪ್ ವಿತರಣೆ ಯೋಜನೆ ಚಾಲ್ತಿಯಲ್ಲಿದೆಯೇ; ಅಥವಾ ಸ್ಥಗಿತಗೊಂಡಿದೆಯೇ; | ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿ ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಗಳು ಕಾರ್ಯನಿರ್ವಹಿಸುತ್ತಿವೆ.<br><br>ಸರ್ಕಾರದಿಂದ ಘೋಷಿಸಲಾದ/ಘೋಷಿಸಲಾಗುವ ಯೋಜನೆಗಳನುಸಾರ ಆಯಾ ಆರ್ಥಿಕ ಸಾಲುಗಳಲ್ಲಿ ಲ್ಯಾಪ್‌ಟಾಪ್ ವಿತರಣೆಗೆ ಕ್ರಮಕೈಗೊಳ್ಳಲಾಗುತ್ತದೆ. |
| (ಆ) | ಕಳೆದ 5 ವರ್ಷದಿಂದ ಈ ಯೋಜನೆ ಚಾಲ್ತಿಯಲ್ಲಿದ್ದರೆ ಇಲ್ಲಿವರೆಗೂ ಎಷ್ಟು ಲ್ಯಾಪ್‌ಟಾಪ್ ವಿತರಣೆ ಮಾಡಲಾಗಿದೆ; ಹಾಗೂ ಸ್ಥಗಿತಗೊಂಡಿದ್ದರೆ ಅದಕ್ಕೆ ಕಾರಣಗಳೇನು; | ತಾಂತ್ರಿಕ ಶಿಕ್ಷಣ ಇಲಾಖೆಯಡಿ ವಿಶೇಷ ಅಭಿವೃದ್ಧಿ ಯೋಜನೆಯ ಮಹತ್ವಾಕಾಂಕ್ಷಿ ತಾಲ್ಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 38 ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ 2023-24ನೇ ಸಾಲಿನಲ್ಲಿ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದು ವ್ಯಾಸಾಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ 2024-25ನೇ ಆರ್ಥಿಕ ಸಾಲಿನಲ್ಲಿ 1243 ಲ್ಯಾಪ್ ಟಾಪ್ ಗಳನ್ನು ವಿತರಿಸಲಾಗಿದೆ.<br><br>2020-21ನೇ ಸಾಲಿನಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಗಳಲ್ಲಿ ಪ್ರಥಮ ವರ್ಷದ, ದ್ವಿತೀಯ ವರ್ಷದ ವಿದ್ಯಾರ್ಥಿಗಳಿಗೆ ಮತ್ತು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಪ್ರಥಮ, ದ್ವಿತೀಯ, ತೃತೀಯ ವರ್ಷದ ಎಲ್ಲಾ ವಿದ್ಯಾರ್ಥಿಗಳಿಗೆ ಒಟ್ಟು 32491 ಟ್ಯಾಬ್ಲೆಟ್ ಪಿ.ಸಿ ಗಳನ್ನು ವಿತರಿಸಲಾಗಿದೆ.<br><br>ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಕಳೆದ 5 ವರ್ಷದಲ್ಲಿ ಈ ಯೋಜನೆಯು ಚಾಲ್ತಿಯಲ್ಲಿ ಇಲ್ಲದೇ ಇರುವುದರಿಂದ, ಲ್ಯಾಪ್‌ಟಾಪ್ ವಿತರಿಸಿರುವುದಿಲ್ಲ. |
| (ಇ) | 2018 ರಲ್ಲಿ ರಾಜ್ಯದ 1520 ಆಯಾ ಐಟಿಐ ಕಾಲೇಜಿನವರು ಒಂದು ಬಾರಿ ಮಾತ್ರ ಲ್ಯಾಪ್‌ಟಾಪ್ ವಿತರಿಸಿದ್ದಾರೆ; ಅದಾದ ನಂತರ ಲ್ಯಾಪ್‌ಟಾಪ್ ವಿತರಣೆ ಮಾಡಿಲ್ಲದಿರುವುದು ನಿಜವೇ; | 2018ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಯ ರಾಜ್ಯ ಅಭಿವೃದ್ಧಿ ಪರಿಷತ್ತಿನ ಕ್ರಿಯಾಯೋಜನೆಯಲ್ಲಿ ಲ್ಯಾಪ್‌ಟಾಪ್‌ಗಳನ್ನು ವಿತರಿಸಲು ಅನುಮೋದನೆಯಾಗಿರುತ್ತದೆ. ಅದರಂತೆ ಲ್ಯಾಪ್ ಟಾಪ್‌ಗಳನ್ನು ಖರೀದಿಸಿ ಒದಗಿಸಲಾಗಿದೆ. |

| | | |
|---|---|---|
| | | ಉನ್ನತ ಶಿಕ್ಷಣ ಇಲಾಖೆಯಿಂದ ಉಚಿತ ಲ್ಯಾಪ್‌ಟಾಪ್ ಯೋಜನೆಗೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಯಾವುದೇ ವರ್ಷದಲ್ಲಿಯೂ ಆಹ್ವಾನಿಸಿರುವುದಿಲ್ಲ. ಸರ್ಕಾರದಿಂದ ಘೋಷಿಸಲಾದ ಯೋಜನೆಗಳನುಸಾರ ಕಾಲೇಜುಗಳಿಂದ ಅರ್ಹ ವಿದ್ಯಾರ್ಥಿಗಳ ಮಾಹಿತಿಗಳನ್ನು ಪಡೆದು, ಲ್ಯಾಪ್‌ಟಾಪ್ ವಿತರಣೆಗೆ ಕ್ರಮಕೈಗೊಳ್ಳಲಾಗುತ್ತದೆ.<br><br>ಕಾಲೇಜು ಶಿಕ್ಷಣ ಇಲಾಖೆಯಡಿ 2016-17 ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಥಮ ಪದವಿ ತರಗತಿಗಳಿಗೆ ಪ್ರವೇಶ ಪಡೆದ ಮತ್ತು ಕೌಟಂಬಿಕ ವಾರ್ಷಿಕ ಆದಾಯ ರೂ. 2.50 ಲಕ್ಷಗಳಿಗಿಂತ ಕಡಿಮೆ ಇದ್ದ ಒಟ್ಟು 24363 ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್‌ಗಳನ್ನು ವಿತರಿಸಲಾಗಿದೆ.<br><br>2019-20ನೇ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಥಮ ಪದವಿ ತರಗತಿಗಳಿಗೆ ಪ್ರವೇಶ ಪಡೆದ ಮತ್ತು ಕೌಟಂಬಿಕ ವಾರ್ಷಿಕ ಆದಾಯ ರೂ. 2.50 ಲಕ್ಷಗಳಿಗಿಂತ ಕಡಿಮೆ ಇದ್ದ ಒಟ್ಟು 109916 ಎಲ್ಲಾ ವರ್ಗಗಳ ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್‌ಗಳನ್ನು ಒದಗಿಸಲಾಗಿದ್ದು, ಪ್ರಸ್ತುತ ಯಾವುದೇ ಬಾಕಿ ಇರುವುದಿಲ್ಲ.<br><br>ತಾಂತ್ರಿಕ ಶಿಕ್ಷಣ ಇಲಾಖೆಯಡಿ 2017-18 ನೇ ಸಾಲಿನಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದ ಒಟ್ಟು 7338 ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್ ಗಳನ್ನು ಒದಗಿಸಲಾಗಿದೆ.<br><br>ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಕೈಗಾರಿಕಾ ತರಬೇತಿ ಕೇಂದ್ರಗಳಲ್ಲಿ ಪ್ರವೇಶ ಹೊಂದಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ತರಬೇತಿದಾರರನ್ನು ಲ್ಯಾಪ್‌ಟಾಪ್ ವಿತರಣೆಗೆ ಪರಿಗಣಿಸಲಾಗಿದೆ. 22,481 ಲ್ಯಾಪ್‌ಟಾಪ್‌ಗಳನ್ನು ವಿತರಣೆ ಮಾಡಲಾಗಿದೆ. |
| (ಈ) | ಯೋಜನೆ ಪ್ರಾರಂಭಗೊಂಡ ವರ್ಷದಿಂದ ಇಲ್ಲಿಯವರೆಗೂ ಲ್ಯಾಪ್‌ಟಾಪ್‌ಗಾಗಿ ಎಷ್ಟು ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿದ್ದಾರೆ; ಇದರಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ವಿತರಣೆ ಮಾಡಲಾಗಿದೆ; ಇನ್ನು ಎಷ್ಟು ಬಾಕಿ ಇದೆ? | |

ಕಡತ ಸಂಖ್ಯೆ: ಇಡಿ 13 ಹೆಚ್‌ಪಿಟಿ 2026

(ಡಾ|| ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು